ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ

# ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ

(ಕರ್ನಾಟಕ ಸರ್ಕಾರದ ಅಧೀನಕೊಳಪಟ್ಟಿದೆ)
ಕೌಶಲ್ಯ ಭವನ, 3ನೇ ಮಹಡಿ, ಡೈರಿ ಸರ್ಕಲ್, ಬನ್ನೇರುಘಟ್ಟ ರಸ್ತೆ, ಬೆಂಗಳೂರು–29
E-Mail ID : skilldev.2017@gmail.com Ph No : 080-2952 2222

ದಿನಾಂಕ:24/01/2024

ಸಂಖ್ಯೆ:ಕೆಎಸ್‌ಡಿಸಿ/ಉಮೇ/ವಿವ–42/2023–24/700/23-24

ಗೆ,

ಮಾನ್ಯ ಕುಲಪತಿಗಳು
ಮೈಸೂರು ವಿಶ್ವವಿದ್ಯಾನಿಲಯ,
ಮೈಸೂರು ಕ್ರಾಫರ್ಡ್ ಹಾಲ್,
ಕೆ.ಜಿ ಕೊಪ್ಪಳ, ಸರಸ್ವತಿಪುರಂ,
ಮೈಸೂರು, ಕರ್ನಾಟಕ 570005.

ಮಾನ್ಯರೇ,

**ವಿಷಯ:** ಸನ್ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಆಯೋಜಿಸಲಾಗುತ್ತಿರುವ ಬೃಹತ್ ಉದ್ಯೋಗ ಮೇಳಕ್ಕೆ ತಮ್ಮ ವ್ಯಾಪ್ತಿಯ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಕಟಿಸಿ, ಆಸಕ್ತ ಉದ್ಯೋಗಾಕಾಂಕ್ಷಿಗಳನ್ನು ಸಜ್ಜುಗೊಳಿಸುವ ಬಗ್ಗೆ.

*-*-*-*-*

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:29.12.2023 ರಂದು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ರಾಜ್ಯದ ಯುವ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಉದ್ಯೋಗ ಮೇಳಗಳನ್ನು ಪರಿಣಾಮಕಾರಿಯಾಗಿ ಆಯೋಜಿಸಲು ಸೂಚಿಸಲಾಗಿದ್ದು, ಈ ಸಂಬಂಧ ಫೆಬ್ರವರಿ ಎರಡನೇ ವಾರದಲ್ಲಿ ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಬೆಂಗಳೂರಿನಲ್ಲಿ ಆಯೋಜಿಸಲು ತೀರ್ಮಾನಿಸಲಾಗಿರುತ್ತದೆ. ಈ ಬೃಹತ್ ಉದ್ಯೋಗ ಮೇಳದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಸುಮಾರು 50 ಸಾವಿರಕ್ಕೂ ಹೆಚ್ಚು ಉದ್ಯೋಗಾಕಾಂಕ್ಷಿಗಳು ಭಾಗವಹಿಸುವ ನಿರೀಕ್ಷೆಯಿದ್ದು, ತಮ್ಮ ವಿಶ್ವವಿದ್ಯಾನಿಲಯದಿಂದ ಈಗಾಗಲೇ ಹಲವು ವಿದ್ಯಾರ್ಥಿಗಳು ಉತ್ತೀರ್ಣಗೊಂಡಿದ್ದು, ಸದರಿ ವಿದ್ಯಾರ್ಥಿಗಳನ್ನು ಒಳಗೊಂಡಂತೆ ರಾಜ್ಯದ ಎಲ್ಲಾ ಯುವಜನತೆಗೆ ಉದ್ಯೋಗಾವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ತಮ್ಮ ಅಮೂಲ್ಯವಾದ ಸಹಕಾರವನ್ನು ನೀಡಬೇಕಾಗಿ ಈ ಮೂಲಕ ಕೋರಲಾಗಿದೆ.

ಈ ಸಂಬಂಧ ನಡೆಸಲಾಗುತ್ತಿರುವ ಬೃಹತ್ ಉದ್ಯೋಗ ಮೇಳಕ್ಕೆ ರಾಜ್ಯದ ಎಲ್ಲಾ ವಲಯಗಳ 500ಕ್ಕೂ ಹೆಚ್ಚಿನ ಪ್ರತಿಷ್ಠಿತ ಕಂಪನಿ/ಉದ್ದಿಮೆ/ಉದ್ಯೋಗದಾತರ ಸಂಸ್ಥೆಗಳು ಭಾಗವಹಿಸಲು ಈಗಾಗಲೇ ಉದ್ದೇಶಿಸಲಾಗಿದ್ದು, ಪ್ರತಿಷ್ಠಿತ ಕಂಪನಿ/ಉದ್ದಿಮೆ /ಉದ್ಯೋಗದಾತರ ಸಂಸ್ಥೆಗಳು ಬೇಡಿಕೆಗೆ ಅನುಗುಣವಾಗಿ ಅರ್ಹ ಉದ್ಯೋಗ ಆಕಾಂಕ್ಷಿಗಳನ್ನು ನೇಮಕಾತಿ ಮಾಡಿಕೊಳ್ಳಲು ಮುಂದಾಗಿರುತ್ತಾರೆ. ಈ ಹಿನ್ನಲೆಯಲ್ಲಿ ತಮ್ಮ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಬರುವ ಎಲ್ಲಾ ಕಾಲೇಜುಗಳ ಅಂತಿಮ ವರ್ಷ ವ್ಯಾಸಂಗ ಮಾಡುತ್ತಿರುವ ಹಾಗೂ ಈಗಾಗಲೇ ಕಾಲೇಜಿನಿಂದ ಹೊರಗುಳಿದ ಮತ್ತು 2020 ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೆ ಉತ್ತೀರ್ಣರಾದ ವಿದ್ಯಾರ್ಥಿಗಳ ಮಾಹಿತಿಯನ್ನು ಈ ಪತ್ರದ ಜೊತೆಯಲ್ಲಿ ಲಗತ್ತಿಸಿದ ನಮೂನೆಯ ಪ್ರಕಾರ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಕಛೇರಿಯ **(EmailID:udyogamela.ksdc@karnataka.gov.in / udyogmela.ksdc@gmail.com)** ಮಿಂಚಂಚೆಗೆ ಕಳುಹಿಸಲು ಹಾಗೂ ಸದರಿ ಉದ್ಯೋಗ ಮೇಳದ ಪ್ರಕಟಣೆಗಳನ್ನು ತಮ್ಮ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಬರುವ ಎಲ್ಲಾ ಕಾಲೇಜುಗಳ ಮುಖ್ಯಸ್ಥರಿಗೆ ತಿಳಿಸಿ, ಆಯಾ ಕಾಲೇಜುಗಳ ವಾಟ್ಸ್ ಆಪ್ ಗ್ರೂಪ್ಸ್, ಇಮೇಲ್ ಹಾಗೂ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಣೆಯನ್ನು ಕೈಗೊಂಡು ವಿದ್ಯಾರ್ಥಿಗಳನ್ನು ಹೆಚ್ಚಿನ ಮಟ್ಟದಲ್ಲಿ ಸಜ್ಜುಗೊಳಿಸಿ, ಉದ್ಯೋಗ ಮೇಳದಲ್ಲಿ ಭಾಗವಹಿಸಲು ಸಹಕರಿಸುವಂತೆ ಮತ್ತು ಸದುಪಯೋಗಪಡಿಸಿಕೊಳ್ಳುವಂತೆ ಪ್ರೇರಿಪಿಸಲು ಈ ಮೂಲಕ ತಮ್ಮಲ್ಲಿ ಕೋರಲಾಗಿದೆ.

ಅದರಂತೆ ಉದ್ಯೋಗ ಮೇಳಕ್ಕೆ ಅಭ್ಯರ್ಥಿಗಳ ನೊಂದಣಿ ಲಿಂಕ್ ಮತ್ತು ಇತರೆ ಸಂಬಂಧಪಟ್ಟ ಮಾಹಿತಿಗಳನ್ನು ನಿಗದಿಪಡಿಸಿದ ನಂತರ ಹಂಚಿಕೊಳ್ಳಲಾಗುವುದು ಎಂಬ ಮಾಹಿತಿಯನ್ನು ಈ ಮೂಲಕ ತಿಳಿಯಬಯಸಲಾಗಿದೆ.

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:**

| ಕ್ರಸಂ. | ಹೆಸರು | ದೂ.ಸಂಖ್ಯೆ |
|---|---|---|
| 1 | ಶ್ರೀ ಪವನ್ ಬಿ.<br>ಕಾರ್ಯನಿರ್ವಾಹಕ ವ್ಯವಸ್ಥಾಪಕರು – ಕೌಶಲ್ಯ ಸಂಪರ್ಕ | 7019613386 |
| 2 | ಶ್ರೀ ವರುಣ್ ಕೆ.ಜೆ. | 9632674657 |
| 3 | ಶ್ರೀಮತಿ ರಜಿನಿ | 8762861800 |
| 4 | ಕುಮಾರಿ ಪವಿತ್ರಾ | 9538100413 |

ತಮ್ಮ ವಿಶ್ವಾಸಿ,

ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ

ಕುಲಪತಿಗಳ ಕಛೇರಿ ಸಂ. 1366 ದಿ. 05/02/24 ಮೈಸೂರು ವಿಶ್ವವಿದ್ಯಾನಿಲಯ

To Registrar 3/2/24

## ನಮೂನೆ / Format

| Sl. No.<br>ಕ್ರ ಸಂ. | Candidate Name<br>ಅಭ್ಯರ್ಥಿಗಳ ಹೆಸರು | Education Qualification<br>ವಿದ್ಯಾರ್ಹತೆ | Year of Passing<br>ಉತ್ತೀರ್ಣರಾದ ವರ್ಷ | Contact Number<br>ದೂರವಾಣಿ ಸಂಖ್ಯೆ | Email-ID<br>ಮಿಂಚಂಚೆ | Specialization<br>ವಿಶೇಷತೆ | District<br>ಜಿಲ್ಲೆ | Taluk<br>ತಾಲ್ಲೂಕು | Remarks<br>ಷರಾ |
|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 |
| | | | | | | | | | |
| | | | | | | | | | |
| | | | | | | | | | |
| | | | | | | | | | |
| | | | | | | | | | |
| | | | | | | | | | |
| | | | | | | | | | |
| | | | | | | | | | |